ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಬೀದರ್ ತೋಟಗಾರಿಕೆ ಮಹಾವಿದ್ಯಾಲಯದ ಜಮೀನಿನ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) -

27 (257) ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಬೀದರ್ ತೋಟಗಾರಿಕೆ ಮಹಾವಿದ್ಯಾಲಯಕ್ಕೆ ರೇಷ್ಮೆ ಇಲಾಖೆಯಲ್ಲಿರುವ ಜಮೀನು ಹಸ್ತಾಂತರಿಸಲಾಗುವುದೆಂದು ಆಶ್ವಾಸನೆ ನೀಡಿದ್ದರೂ, ಇನ್ನೂವರೆಗೆ ಜಮೀನು ಹಸ್ತಾಂತರವಾಗಿಲ್ಲದಿರಲು ಕಾರಣವೇನು ;

(ಆ) ತೋಟಗಾರಿಕೆ ಮಹಾವಿದ್ಯಾಲಯಕ್ಕೆ ಈ ವರ್ಷದಲ್ಲಿ ಜಮೀನು ಹಸ್ತಾಂತರವಾಗದಿದ್ದರೆ ಬರುವ ವರ್ಷದಲ್ಲಿ ಕಾಲೇಜಿನ ಮಾನ್ಯತೆ ರದ್ದಾಗುವ ವಿಷಯ ಸರ್ಕಾರ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಜಮೀನು ಹಸ್ತಾಂತರಿಸುವುದು ಯಾವಾಗ ?